## ಚುಟುಕು ಸುದ್ದಿ

### 'ಪರಿಸರ ಸಮತೋಲನಕ್ಕಾಗಿ ಕಚೇರಿ ಆವರಣದಲ್ಲಿ ಸಸಿ ಬೆಳೆಸಲಾಗುತ್ತದೆ'

**ಉದಯಕಾಲ ನ್ಯೂಸ್**

**ದಾವಣಗೆರೆ:** ಪರಿಸರ ಸಮತೋಲನಕ್ಕಾಗಿ ಜಿಲ್ಲಾಡಳಿತ ಭವನ ಸೇರಿದಂತೆ ಕಚೇರಿಗಳ ಆವರಣದಲ್ಲಿ ಗಿಡ, ಮೂರು ಬೆಳೆಸಲು ಈ ವರ್ಷ ಸಸಿ ಹಾಕಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಜೂನ್ 5 ರಂದು ಜಿಲ್ಲಾಡಳಿತ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ, ಅರಣ್ಯ ಇಲಾಖೆ ವತಿಯಿಂದ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ಅವರು ಇಲಾಖೆಗಳ ಆವರಣ ಮತ್ತು ನೀರು ಪೂರೈಕೆ ಮಾಡುವ ಟ್ಯಾಂಕ್ ಗಳ ಸುತ್ತಮುತ್ತ ಹಾಗೂ ಖಾಲಿ ಇರುವ ಸರ್ಕಾರಿ ಜಾಗಗಳಲ್ಲಿ ಸಸಿ ನೆಡುವ ಮೂಲಕ ಪರಿಸರ ಸಮತೋಲನ ಕಾಯ್ದುಕೊಳ್ಳಲು ಯೋಜಿಸಲಾಗಿದೆ. ಜಿಲ್ಲೆಯ ರೈತ ಸಂಘಟನೆಗಳು ಸಹ ಪರಿಸರ ಸಂರಕ್ಷಣೆಗೆ ಗಿಡ, ಮರಬೆಳೆಸಲು ಮುಂದೆ ಬಂದಿದ್ದಾರೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಎಸ್.ಪಿ. ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನಾ ಭಾನು ಎಸ್.ಬಳ್ಳಾರಿ, ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ಇನ್ನಿತರರು ಭಾಗವಹಿಸಿದ್ದರು.

### ಅರಣ್ಯ ಪ್ರದೇಶದಲ್ಲಿ ಗಿಡಗಳನ್ನು ನೆಟ್ಟ ವಿದ್ಯಾರ್ಥಿಗಳು

**ಉದಯಕಾಲ ನ್ಯೂಸ್**

ಕಡೂರು: ಕಡೂರಿನ ಹೂರ ವಲಯದ ಪ್ರಜ್ಞಾ ಸೆಂಟ್ರಲ್ ಶಾಲೆಯ ವಿದ್ಯಾರ್ಥಿಗಳು ಬುಧವಾರ ಪರಿಸರ ದಿನಾಚರಣೆ ಅಂಗವಾಗಿ ತಂಗಲಿ ಶ್ರೀಗಂಧ ರಕ್ಷಿತಾರಣ್ಯಕ್ಕೆ ಬೇಟಿ ನೀಡಿ ವಿದ್ಯಾರ್ಥಿಗಳು ತಾವೇ ಸ್ವತಃ ತಯಾರಿಸಿದ ಸೀಡ್ ಬಾಲ್ ಅನ್ನು ಅರಣ್ಯ ಪ್ರದೇಶದಲ್ಲಿ ಹರಡಿ ಅರಣ್ಯಾಧಿಕಾರಿಗಳ ಮೆಚ್ಚುಗೆಗೆ ಪಾತ್ರರಾಗಿ ಅರಣ್ಯ ಇಲಾಖೆ ಅಧಿಕಾರಿಗಳು ಪರಿಸರಕ್ಕೆ ಉಪಯುಕ್ತವಾದ ಗಿಡಗಳ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ನೀಡಿದರು.

ತಂಗಲಿ ಶಾಖೆಯ ಉಪವಲಯ ಅರಣ್ಯಾಧಿಕಾರಿ ಹರೀಶ್ ಮಾತನಾಡಿ ಮಕ್ಕಳು ನಾಲ್ಕು ಗೋಡೆಯ ಮಧ್ಯೆ ಪಾಠ ಕೇಳುವುದನ್ನು ಬಿಟ್ಟರೆ ಪರಿಸರದ ಬಗ್ಗೆ ತಿಳಿದುಕೊಳ್ಳುವ ಕಾರ್ಯ ಮಾಡುವುದಿಲ್ಲ, ಪ್ರಸ್ತುತ ದಿನಗಳಲ್ಲಿ ಮಕ್ಕಳು ಪರಿಸರದ ಬಗ್ಗೆ ಉಪಯುಕ್ತವಾದ ಮಾಹಿತಿಯನ್ನು ನಮ್ಮಲ್ಲಿ ಪಡೆಯಬಹುದು. ಮಕ್ಕಳು ಹೊರ ಪ್ರಪಂಚಕ್ಕೆ ಬಂದು ಪರಿಸರದ ವಿವಿಧ ಸ್ಥಳಗಳಿಗೆ ಬೇಟಿ ನೀಡಿ ಮಾಹಿತಿ ಪಡೆಯಲು ಅವಕಾಶ ಇದೆ. ಇದಕ್ಕೆ ಶಾಲೆಯ ವ್ಯವಸ್ಥಾಪಕ ಮಂಡಲಿಗಳು ಅವಕಾಶ ಮಾಡಿಕೊಡಬೇಕು. ಮಕ್ಕಳೇ ತಯಾರಿಸಿದ ಸೀಡ್ ಬಾಲ್ ನೋಡಿ ಇಲಾಖೆಗೆ ಸಂತಸ ತಂದಿದೆ ಇದು ಇತರೆ ಶಾಲೆಯ ಮಕ್ಕಳಿಗೆ ಮಾದರಿ ಆಗಬೇಕಿದೆ. ತಂಗಲಿ ಭಾಗದಲ್ಲಿ ಹೆಚ್ಚಾಗಿ ಶ್ರೀಗಂಧ ಇರುವುದನ್ನು ಗುರುತಿಸಿ ಸರ್ಕಾರ ಶ್ರೀಗಂಧ ರಕ್ಷಿತಾರಣ್ಯ ಎಂದು ಮಾಡಲಾಗಿದೆ ಎಂದರು.

ಪ್ರಜ್ಞಾ ಸೆಂಟ್ರಲ್ ಶಾಲೆಯ ಕಾರ್ಯದರ್ಶಿ ಎನ್. ಪಿ. ಮಂಜುನಾಥ ಪ್ರಸನ್ನ ಮಾತನಾಡಿ ಇತ್ತೀಚಿನ ವರ್ಷಗಳಲ್ಲಿ ಪರಿಸರದಲ್ಲಿ ಏರುಪೇರಾಗಿ ತಾಪಮಾನದಲ್ಲಿ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತಿದೆ, ಒಮ್ಮೆ ಕೆಲವು ಪ್ರದೇಶಗಳಲ್ಲಿ ಅತಿಹೆಚ್ಚು ಮಳೆ, ಬಹಳಷ್ಟು ಪ್ರದೇಶದಲ್ಲಿ ಮಳೆಯೇ ಬಾರದೆ ಬರಗಾಲದ ಪರಿಸ್ಥಿತಿ ಎದುರಾಗುವುದು ಇದರಿಂದಾಗಿ ಮಕ್ಕಳಲ್ಲಿ ಪರಿಸರದ ಬಗ್ಗೆ ತಿಳಿಸುವ ಕಾರ್ಯ ಆಗಬೇಕಿದೆ ಎಂದರು.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಅಬ್ದುಲ್ ರಜೀಕಾ ನಧಾಫ್, ಯಲ್ಲಮ್ಮ, ಸಂತೋಷ್ ಕುಮಾರ್, ರಘು, ಶಾಲಾ ಶಿಕ್ಷಕರಾದ ಮಲ್ಲಿಕಾರ್ಜುನ್, ಉಷಾ ಬಿ. ಎಲ್, ಲೀಲಾ ಕೆ, ಮಂಜುನಾಥ್ ಎ ಇದ್ದರು.

# ಸೋಲು-ಗೆಲುವು ಸಾಮಾನ್ಯ, ಕಾರ್ಯಕರ್ತನಾಗಿ ಕೆಲಸ ಮಾಡುವೆ

## ಪದ್ಮರಾಜ್ ಪೂಜಾರಿ

**ಉದಯಕಾಲ ನ್ಯೂಸ್**

**ಮಂಗಳೂರು:** ಕರಾವಳಿಯಲ್ಲಿ ಕಾಂಗ್ರೆಸ್ ಗೆ ಪ್ರತಿಕೂಲವಾದ ವಾತಾವರಣದ ಮಧ್ಯೆಯೂ ಪಕ್ಷ ಉತ್ತಮ ಸಾಧನೆ ಮಾಡಿದೆ. ಇದು ತೃಪ್ತಿಕರ ಸಾಧನೆಯೇ ಆಗಿದೆ. ಟಿಕೆಟ್ ಘೋಷಣೆಯ ಬಳಿಕ ಮತದಾರರನ್ನು ಭೇಟಿಯಾಗಲು ಸಿಕ್ಕಿದ ಕೆಲ ದಿನಗಳ ಕಾಲಾವಧಿಯಲ್ಲಿ ಜಿಲ್ಲೆಯ 6.15 ಲಕ್ಷ ಮತದಾರರ ಮನಸ್ಸು ಗೆಲ್ಲಲು ಸಾಧ್ಯ ಆಗಿರುವ ಬಗ್ಗೆ ಖುಷಿ ಇದೆ ಎಂದು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪದ್ಮರಾಜ್ ಆರ್. ಪೂಜಾರಿ ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಜಿಲ್ಲೆಯಲ್ಲಿ ಪಕ್ಷ ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಮುಂದಿನ ಒಂದೂವರೆ ವರ್ಷದ ಅವಧಿಯಲ್ಲಿ ಬೂತ್ ಮಟ್ಟದಲ್ಲಿ ಸಂಘಟಿಸುವ ಕಾರ್ಯವನ್ನು ನಡೆಸುವೆ. ಬಿಜೆಪಿ ಅಭ್ಯರ್ಥಿ ಹಾಗೂ ಸಂಸದರಾಗಿ ಆಯ್ಕೆಯಾದ ಕ್ಯಾ. ಬ್ರಿಜೇಶ್ ಚೌಟ ಅವರನ್ನು ಅಭಿನಂದಿಸುವುದಾಗಿ ಹೇಳಿದ ಅವರು, ಜಿಲ್ಲೆಯ ಅಭಿವೃದ್ಧಿ ಹಾಗೂ ಸೌಹಾರ್ದಕ್ಕೆ ಒತ್ತು ನೀಡುವ ನಿಟ್ಟಿನಲ್ಲಿ ನೂತನ ಸಂಸದರನ್ನು ಮುಂದೆಯೂ ಎಲ್ಲಾ ರೀತಿಯಲ್ಲಿ ಬೆಂಬಲಿಸಲು ಸದಾ ಸಿದ್ಧ ಎಂದರು.

ನೂತನ ಸಂಸದರು ಇತರ ಎಲ್ಲ ವಿಚಾರಗಳನ್ನು ಬಿಟ್ಟು ಜಿಲ್ಲೆಯ ಅಭಿವೃದ್ಧಿಯ ಮೂಲಕ ಸಾಮರಸ್ಯದ ಗತ ವೈಭವವನ್ನು ಮರಳಿ ತರುವ ಪ್ರಯತ್ನ ಮಾಡಬೇಕು. ಸಾಮಾನ್ಯ ಕಾರ್ಯಕರ್ತನಾಗಿದ್ದ ನನಗೆ ಗೌರವ ನೀಡಿ ಪಕ್ಷದ ಹಿರಿಯ ನಾಯಕರು ಟಿಕೆಟ್ ನೀಡಿದರು. ಪಕ್ಷದ ಕಾರ್ಯಕರ್ತರು ಹಗಲಿರುಳು ಕ್ಷೇತ್ರದಲ್ಲಿ ತನ್ನ ಗೆಲುವಿಗಾಗಿ ಶ್ರಮಿಸಿದ್ದಾರೆ. ಚುನಾವಣೆಯಲ್ಲಿ ಸೋಲು ಗೆಲುವು ಸಾಮಾನ್ಯ. ಜಿಲ್ಲೆಯಲ್ಲಿ ಸ್ಪರ್ಧೆಗೆ ಟಿಕೆಟ್ ಪಡೆಯುವ ಸಂದರ್ಭ ಇಲ್ಲಿ ಟಿಕೆಟ್ ಪಡೆಯುವುದು ವ್ಯರ್ಥ ಎಂಬ ಮಾತು ಕೇಳಿ ಬಂದಿತ್ತು. ಮತದಾರರನ್ನು ಸಂಪರ್ಕಿಸಲು ಸಿಕ್ಕಿದ ಕೆಲವೇ ದಿನಗಳಲ್ಲಿ ಕೆಲ ಕ್ಷೇತ್ರಗಳಿಗೆ ಕೆಲ ಗಂಟೆ ಸಮಯವನ್ನೂ ನೀಡಲು ಸಾಧ್ಯವಾಗಿರಲಿಲ್ಲ. ಆದರೆ ಪಕ್ಷದ ನಾಯಕರು, ಕಾರ್ಯಕರ್ತರು ಕೆಲಸ ಮಾಡಿದ್ದಾರೆ ಎಂದರು.

ಚುನಾವಣೆಯಲ್ಲಿ ನಾನು ಸೋತಿರಬಹುದು, ಆದರೆ ಪಕ್ಷದ ಕಾರ್ಯಕರ್ತರು ನನಗೆ ನೀಡಿದ ಬೆಂಬಲ ಎಂದು ಮರೆಯಲ್ಲ. ನಿನ್ನೆ ರಾಷ್ಟ್ರೀಯ ನಾಯಕರು ಕರೆ ಮಾಡಿ ನನಗೆ ವಿಶ್ವಾಸ ತುಂಬುವ ಕೆಲಸ ಮಾಡಿದ್ದು ನನಗೆ ಮತ್ತಷ್ಟು ಶಕ್ತಿ ತಂದಿದೆ.

ನಾಯಕರು ಹಾಗೂ ಕಾರ್ಯಕರ್ತರ ವಿಶ್ವಾಸವನ್ನು ಉಳಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲೂ ಪಕ್ಷದಲ್ಲಿ ಸಕ್ರಿಯವಾಗಿ ಕಾರ್ಯ ನಿರ್ವಹಿಸಲಿದ್ದೇನೆ ಎಂದರು.

ಮಾಜಿ ಸಚಿವ ರಮಾನಾಥ ರೈ, ಮುಖಂಡರಾದ ಶಶಿಧರ ಹೆಗ್ಡೆ, ಶಾಹುಲ್ ಹಮೀದ್, ಶುಭೋದಯ ಆಳ್ವ, ಅಶ್ರಫ್, ಲ್ಯಾನ್ಸಿ ಲೋಟ್ ಪಿಂಟೋ, ಸಂಶುದ್ದೀನ್, ಅಬ್ದುಲ್ ಲತೀಫ್, ಅಬ್ದುಲ್ ಖಾದರ್, ಅಬ್ದುಲ್ ರವೂಫ್, ಸುಹಾನ್ ಆಳ್ವ ಇದ್ದರು.

# ಬಾಲ ಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆ, ಪುನರ್ವಸತಿಗೆ ಕ್ರಮ ವಹಿಸಲು ಸೂಚನೆ

**ಉದಯಕಾಲ ನ್ಯೂಸ್**

**ದಾವಣಗೆರೆ:** ಬಾಲಕಾರ್ಮಿಕರು ಮತ್ತು ಕಿಶೋರಕಾರ್ಮಿಕನ್ನು ದುಡಿಮೆಯಿಂದ ಬಿಡುಗಡೆಗೊಳಿಸುವ ಜೊತೆಗೆ ಪುನರ್ವಸತಿ ಕಲ್ಪಿಸಲು ಒತ್ತು ನೀಡಲು ಹಾಗೂ ಸಂಘಟಿತ ಮತ್ತು ಅಸಂಘಟಿತ ವಲಯಗಳಲ್ಲಿ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಾಲಕಾರ್ಮಿಕ ಪದ್ದತಿ ನಿರ್ಮೂಲನೆ ಬಗ್ಗೆ ಧ್ವನಿ ಸುರುಳಿ ಪ್ರಚಾರ ಮಾಡುವ ಮೂಲಕ ಜನರಲ್ಲಿ ತಿಳುವಳಿಕೆ ಮೂಡಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಬಾಲ ಕಾರ್ಮಿಕ ಪದ್ದತಿ ನಿರ್ಮೂಲನಾ ಯೋಜನಾ ಸೊಸೈಟಿ ಅಧ್ಯಕ್ಷರಾದ ಡಾ.ವೆಂಕಟೇಶ್ ಎಂ.ವಿ. ತಿಳಿಸಿದರು.

ಬುಧವಾರ(ಜೂ.5) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರುಗಳ ವತಿಯಿಂದ ಆಯೋಜಿಸಲಾದ ಕಾರ್ಯಕಾರಿ ಹಾಗೂ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಾಲಕಾರ್ಮಿಕರು ಮತ್ತು ಕಿಶೋರಕಾರ್ಮಿಕರನ್ನು ಬಿಡುಗಡೆ ಮತ್ತು ಪುನರ್ವಸತಿಗೊಳಿಸುವ ಬಗ್ಗೆ ದೊಡ್ಡ ಉದ್ದಿಮೆಗಳು ಫ್ಯಾಕ್ಟರಿಗಳು, ಡಾಬಾ ಹೋಟೆಲ್, ಶಾಪ್‌ಗಳಲ್ಲಿನ ಬಾಲಕಾರ್ಮಿಕರನ್ನು ಬಿಡುಗಡೆಗೊಳಿಸಿ, ಪುನರ್ವಸತಿ ಕಲ್ಪಿಸಬೇಕು.

ಇಟ್ಟಂಗಿ ಭಟ್ಟಿಗಳಲ್ಲಿ, ಮಂಡಕ್ಕಿ ಭಟ್ಟಿಗಳಲ್ಲಿ, ಕೆಲಸ ಮಾಡಲು ಬೇರೆ ಬೇರೆ ಜಿಲ್ಲೆಗಳಿಂದ ಹಾಗೂ ಹೊರ ರಾಜ್ಯದಿಂದ ಕುಟುಂಬ ಸಮೇತರಾಗಿ 150 ರಿಂದ 200 ಕಾರ್ಮಿಕರು ವಲಸೆ ಬರುತ್ತಾರೆ, ಅವರೊಂದಿಗೆ ಮಕ್ಕಳು ಬಂದಿರುತ್ತಾರೆ. ಅಂತವರಿಗೆ ಶಿಕ್ಷಣದ ಮಹತ್ವ ತಿಳಿಸುವುದು, ಮಕ್ಕಳನ್ನು ಶಾಲೆಗೆ ಬರುವಂತೆ ಪೋಷಕರ ಮನವೊಲಿಸುವ ಜಾಗೃತಿ ಹಾಗೂ ಕಾನೂನು ಅರಿವು ಮೂಡಿಸಬೇಕೆಂದರು. ಸಿ.ಆರ್.ಸಿ ಸೆಂಟರ್ ಸಂಪರ್ಕಿಸಿ ಮಕ್ಕಳಿಗೆ ಶಿಕ್ಷಣಕ್ಕೆ ಅನುಕೂಲವಾಗುವಂತಹ ಚಟುವಟಿಕೆಗಳ ಆಟಿಕೆಗಳನ್ನು ನೀಡಿ ಅರಿವು ಮೂಡಿಸುವುದು.

ಎಸ್.ಸಿ.ಪಿ- ಟಿ.ಎಸ್.ಪಿ ಅನುದಾನವನ್ನು ನೀಡಿರುವ ಮಾರ್ಗದರ್ಶನದಂತೆ ಗ್ರಾಮೀಣ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಭೇಟಿ ಅಲ್ಲಿನ ವಾಸ್ತವತೆಯ ಸಮಿಕ್ಷೆ ನಡೆಸಿ ಅಲ್ಲಿರುವ ಮಕ್ಕಳ ಬಗ್ಗೆ ಪರಿಶೀಲಿಸಿ ಕನಿಷ್ಠ ಹತ್ತನೆ ತರಗತಿಯ ವರೆಗೆ ಶಿಕ್ಷಣ ಪಡೆಯುವಂತೆ ಮಕ್ಕಳಲ್ಲಿ ಅರಿವು ಮೂಡಿಸುವ ಪ್ರಯತ್ನ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಸಿಆರ್ ಪಿಗಳಿಗೆ ತಿಳಿಸಿದರು.

ಕೈಗಾರಿಕೆ ಮತ್ತು ಹೋಟೆಲ್‌ಗಳಲ್ಲಿ ಕೆಲಸಗಳಲ್ಲಿ ಹೆಚ್ಚಾಗಿ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳಲಾಗುತ್ತಿದೆ. ಈ ಬಗ್ಗೆ ಜಿಲ್ಲಾ ಕಾರ್ಯಪಡೆಯಲ್ಲಿ ನೇಮಕಗೊಂಡಿರುವ ಎಲ್ಲಾ ಇಲಾಖೆಯ ಅಧಿಕಾರಿಗಳು ಮಾಸಿಕ ತಪಾಸಣೆಗಳಲ್ಲಿ ಭಾಗವಹಿಸಿ ಬಾಲಕಾರ್ಮಿಕರು ಕಂಡುಬಂದಲ್ಲಿ ಅವರಲ್ಲಿ ಅರಿವು ಮೂಡಿಸಿ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ನಂತರ ಮಕ್ಕಳ ಕುಟುಂಬಕ್ಕೆ ಸಾಮಾಜಿಕ ಭದ್ರತೆಯಡಿ ಸರ್ಕಾರದ ಸೇವೆಗಳನ್ನು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಸಹಕರಿಸುವಂತೆ ಸೂಚಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕರೆಣ್ಣ ಮಾತನಾಡಿ ಅನಿರೀಕ್ಷಿತ ದಾಳಿಯಲ್ಲಿ ಸಿಕ್ಕ ಮಕ್ಕಳನ್ನು ಹತ್ತಿರದ ಮೂರಾರ್ಜಿ ಶಾಲೆಗಳಿಗೆ ದಾಖಲಿಸುವುದು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ಪಡೆದು ಪುನಃ ಶಾಲೆಗೆ ದಾಖಲಿಸಿಕೊಳ್ಳುವುದು ಮಕ್ಕಳು ಶಾಲೆಯಿಂದ ಹೊರಗೆ ಉಳಿಯದಂತೆ ಸೂಕ್ತ ಕ್ರಮ ವಹಿಸಲು ತಿಳಿಸಿದರು. ಹಾಗೂ ನವೆಂಬರ್ ತಿಂಗಳಿಂದ ಆನಗೋಡು, ಕುಕ್ಕುವಾಡ, ಹರಿಹರದಲ್ಲಿ ಕಬ್ಬು ಕಟಾವು ಮಾಡಲು ಮಹಾರಾಷ್ಟ್ರದಿಂದ ಕಾರ್ಮಿಕ ಕುಟುಂಬ ವಲಸೆ ಬರುತ್ತಾರೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಸಭೆಯ ಗಮನಕ್ಕೆ ತಂದು ಅಂತಹ ಮಕ್ಕಳನ್ನು ಗಮನಿಸಿ ಅವರು ಶಿಕ್ಷಣದಿಂದ ವಂಚಿತರಾಗದಂತೆ ನಾವೆಲ್ಲರೂ ಶ್ರಮಿಸೋಣ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಡಿಡಿಪಿಐ ಕೊಟ್ರೇಶ್, ಜಿಲ್ಲಾ ಮಕ್ಕಳ ಘಟಕದ ರಕ್ಷಣಾಧಿಕಾರಿ ಕವಿತ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ದ.ಕ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು: ಕಟೀಲ್

**ಉದಯಕಾಲ ನ್ಯೂಸ್**

**ಮಂಗಳೂರು:** ದಕ್ಷಿಣ ಕನ್ನಡ ಲೋಕ ಸಭಾ ಕ್ಷೇತ್ರದಲ್ಲಿ ಬಿಜೆಪಿಗೆ ಮತ್ತೊಮ್ಮೆ ದೊಡ್ಡ ಮಟ್ಟದ ಜಯ ಸಿಕ್ಕಿದೆ ಎಂದು ಬಿಜೆಪಿ ಮಾಜಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಲೋಕಸಭಾ ಚುನಾವಣಾ ಫಲಿತಾಂಶದ ಬಳಿಕ ಮಾಧ್ಯಮ ಪ್ರತಿದಿನಗಳಿಗೆ ತಿಳಿಸಿದರು.

ಜಿಲ್ಲೆಯ ಅಭಿವೃದ್ಧಿ ಕಾರ್ಯಗಳು ಮುಂದೆ ಬ್ರಿಜೇಶ್ ಚೌಟ ಅವರ ನೇತೃತ್ವದಲ್ಲಿ ಎಲ್ಲರ ಸಹಕಾರದೊಂದಿಗೆ ಮುಂದುವರಿಯುವ ವಿಶ್ವಾಸವಿದೆ. ರಾಜ್ಯದಲ್ಲಿಯೂ ನಿರೀಕ್ಷೆ ಯಂತೆ ಬಿಜೆಪಿ 17 ಕ್ಷೇತ್ರದಲ್ಲಿ ಜಯಗಳಿಸಿದೆ. ದೇಶದಲ್ಲಿ ಎನ್‌ಡಿಎ ನೇತೃತ್ವದ ಸರಕಾರ ರಚನೆಯಾಗಲಿದೆ. 295 ಕ್ಷೇತ್ರ ಗಳಲ್ಲಿ ಮತದಾರರು ಎನ್ ಡಿಎ ಸರಕಾರವನ್ನು ಬೆಂಬಲಿಸಿದ್ದಾರೆ. ಇದರಿಂದಾಗಿ ಸರಳ ಬಹುಮತದೊಂದಿಗೆ ಮತ್ತೊಮ್ಮೆ ಎನ್ ಡಿಎ ಸರಕಾರ ಅಧಿಕಾರ ಪಡೆದಿದೆ ಎಂದು ಹೇಳಿದರು.

ಕೇರಳ ರಾಜ್ಯದಲ್ಲಿ ನಾನು ಚುನಾವಣಾ ಕೆಲಸದಲ್ಲಿ ತೊಡಗಿಸಿಕೊಂಡಿದ್ದೆ, ಈ ಬಾರಿ ತ್ರಿಶೂರಿನಲ್ಲಿ ಬಿಜೆಪಿ ಖಾತೆ ತೆರೆದಿರುವುದಕ್ಕೆ ಕಾರಣರಾದ ಮತದಾರರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

# ಪದ್ಮ ದೀಪ ಪಬ್ಲಿಕ್ ಶಾಲೆ, ಮಕ್ಕಳಿಂದ ಪರಿಸರ ಪಾಠ

**ಉದಯಕಾಲ ನ್ಯೂಸ್**

**ಶಿವಮೊಗ್ಗ:** ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಇಲ್ಲಿನ ಮಾರಶೆಟ್ಟಿ ಹಳ್ಳಿಯ ವೃತ್ತದಲ್ಲಿ ಪದ್ಮ ದೀಪ ಪಬ್ಲಿಕ್ ಶಾಲೆಯ ಮಕ್ಕಳು ಗ್ರಾಮಸ್ಥರಲ್ಲಿ ಹಾಗೂ ಮಕ್ಕಳಲ್ಲಿ ಪರಿಸರದ ಪ್ರಾಮುಖ್ಯತೆ ಹಾಗೂ ಸಂರಕ್ಷಣೆಯಾ ಹಾಗೂ ಅವಶ್ಯಕತೆಯ ಬೀದಿ ನಾಟಕ ಪ್ರದರ್ಶಿಸಿದರು.

ಪರಿಸರದ ಮೇಲೆ ಮಾನವನ ಅತಿಯಾದ ಹಸ್ತಕ್ಷೇಪ ಹಾಗೂ ಇದರಿಂದ ಮಾನವನಿಗೆ ಆಗುವ ದುಷ್ಪರಿಣಾಮದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ನಾಟಕದ ಮೂಲಕ ಮನುಷ್ಯನ ದೈನಂದಿನ ಕೆಟ್ಟ ಚಟಗಳಿಂದ ಪರಿಸರ ಮಾಲಿನ್ಯ ಹೇಗೆ ಉಂಟಾಗುತ್ತಿದೆ ಅವುಗಳಿಂದ ಪ್ರಾಣಿಗಳಿಗೆ ಮತ್ತು ಪರಿಸರಕ್ಕೆ ಹೇಗೆ ಹಾನಿ ಆಗುತ್ತದೆ ಎಂಬುವುದೇ ನಾಟಕದ ಮುಖ್ಯ ಉದ್ದೇಶವಾಗಿತ್ತು.

ನಾಟಕದ ನಿರ್ದೇಶನ ಸಜಿ ಆರ್ ರಂಗ ಶಿಕ್ಷಕರು ಪದ್ಮದೀಪ ಪಬ್ಲಿಕ್ ಸ್ಕೂಲ್ ಮಾರ್ಗದರ್ಶನ ವೆಂಕಟೇಶ್ವರ ಕೆ ಸ್ವರ ಸಲಹಾ ಮಂಡಳಿಯ ಮುಖ್ಯಸ್ಥರು ಪದ್ಮ ದೀಪ ಪಬ್ಲಿಕ್ ಸ್ಕೂಲ್ ಹಾಗೂ ತಂಗರಾಜು ಕೆ.ಪ್ರಾಂಶುಪಾಲರು ಪದ್ಮ ದೀಪ ಪಬ್ಲಿಕ್ ಸ್ಕೂಲ್ ಸಂಪೂರ್ಣ ಸಹಕಾರ ಕಿರಣ್ ಕುಮಾರ್ ಎಸ್.ಯು. ನೀಡಿದರು.

# ಪ್ರತಿಯೊಬ್ಬರೂ ಪರಿಸರವನ್ನು ಉಳಿಸಿ ಬೆಳೆಸಬೇಕಿದೆ: ನ್ಯಾ.ಆರ್.ಚೇತನ್

**ಉದಯಕಾಲನ್ಯೂಸ್**

**ಜಗಳೂರು:** ಮನೆಗೊಂದು ಮರ ಊರಿಗೊಂದು ವನ ಬೆಳೆಸುವ ಮೂಲಕ ಪ್ರತಿಯೊಬ್ಬರೂ ಪರಿಸರವನ್ನು ಉಳಿಸಿ ಬೆಳೆಸಬೇಕೆಂದು ಜೆಎಂಎಫ್‌ಸಿ ನ್ಯಾಯಾಧೀಶ ಆರ್.ಚೇತನ್ ಹೇಳಿದರು.

ಪಟ್ಟಣದ ಜೆಎಂಎಫ್‌ಸಿ ನ್ಯಾಯಾಲಯದ ಆವರಣದಲ್ಲಿ ಬುಧವಾರ ಪ್ರಾದೇಶಿಕ ಹಾಗೂ ಸಾಮಾಜಿಕ ವಲಯ ಅರಣ್ಯ ಇಲಾಖೆ